ಕಂ.ಇ.09 ಎ.ಡಿ.ಇ.2004

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ: 07.02.2004

## ಸುತ್ತೋಲೆ

**ವಿಷಯ: ಅಸ್ವಾಭಾವಿಕ ಮರಣ ಪ್ರಕರಣಗಳಲ್ಲಿ, ಶವ ಪಂಚನಾಮೆ ಮತ್ತು ತನಿಖೆಯನ್ನು ಕ್ಷಿಪ್ರವಾಗಿ ನಡೆಸುವ ಬಗ್ಗೆ**

---

ಅಸ್ವಾಭಾವಿಕ ಮರಣ ಪ್ರಕರಣಗಳು ಅಂದರೆ ಒಬ್ಬ ವ್ಯಕ್ತಿಯು ಆತ್ಮಹತ್ಯೆ ಮಾಡಿಕೊಂಡಿದ್ದಾನೆಂದು ಅಥವಾ ಮತ್ತೊಬ್ಬನಿಂದ, ಒಂದು ಪ್ರಾಣಿಯಿಂದ, ಯಂತ್ರದಿಂದ, ಅಪಘಾತದಿಂದ ಕೊಲ್ಲಲ್ಪಟ್ಟಿದ್ದಾನೆಂದು ಅಥವಾ ಬೇರೆ ರೀತಿಯಲ್ಲಿ ಸಂಶಯಕ್ಕೆಡೆಕೊಡುವ ರೀತಿಯಲ್ಲಿ ಸತ್ತಿದ್ದಾನೆಂದು ಪೋಲೀಸ್ ಅಧಿಕಾರಿಗಳಿಗೆ ಮಾಹಿತಿ ದೊರೆತಾಗ, ಅವನು ಶವ ಪಂಚನಾಮೆಯನ್ನು ನಡೆಸಲು ಶಕ್ತಗೊಳಿಸಲಾದ ತೀರಾ ಹತ್ತಿರದ ಕಾರ್ಯನಿರ್ವಾಹಕ ದಂಡಾಧಿಕಾರಿಗೆ ಮಾಹಿತಿಯನ್ನು ನೀಡಬೇಕಾಗುತ್ತದೆ. ಇದೇ ರೀತಿ ವಿವಾಹವಾದ ಏಳು ವರ್ಷಗಳ ಅವಧಿಯಲ್ಲಿ ಯಾವುದೇ ಮಹಿಳೆಯು ಆತ್ಮಹತ್ಯೆ ಮಾಡಿಕೊಂಡಿದ್ದಲ್ಲಿ ಅಥವಾ ಬೇರೊಬ್ಬ ವ್ಯಕ್ತಿಯಿಂದ ಆಕೆ ಕೊಲ್ಲಲ್ಪಟ್ಟಿದ್ದಾಳೆ ಎಂಬ ಸಂಶಯಕ್ಕೆ ಎಡೆಮಾಡಿಕೊಡುವ ಸಂದರ್ಭದಲ್ಲಿ ಆಕೆ ಸತ್ತಿದ್ದರೆ, ಅಂಥ ಪ್ರಕರಣಗಳಲ್ಲಿಯೂ ಸಹ ಪೋಲೀಸ್ ಅಧಿಕಾರಿಯು ಮೇಲೆ ತಿಳಿಸಿದ ಪ್ರಕಾರ ಕ್ರಮ ಜರುಗಿಸಬೇಕಾಗುತ್ತದೆ.

ಇಂತಹ ಸಂದರ್ಭಗಳಲ್ಲಿ ಕಾರ್ಯನಿರ್ವಾಹಕ ದಂಡಾಧಿಕಾರಿಗಳು ಕ್ಷಿಪ್ರಗತಿಯಲ್ಲಿ ಕಾರ್ಯೋನ್ಮುಖರಾಗಿ Cr.PC ಕಲಂ 176ರ ಅಡಿ ನಿಗದಿಪಡಿಸಲಾದ ವಿಧಿ ವಿಧಾನಗಳನ್ನು ಅನುಸರಿಸಿ ಶವ ಪಂಚನಾಮೆ, ತನಿಖೆ ಇತ್ಯಾದಿಗಳನ್ನು ನಡೆಸಬೇಕಾಗುತ್ತದೆ. ಹಲವಾರು ಸಂದರ್ಭಗಳಲ್ಲಿ ಮರಣ ಶಯ್ಯೆಯಲ್ಲಿರುವ ಮಹಿಳೆಯ ಮರಣ ಪೂರ್ವ(Dying Declaration) ಹೇಳಿಕೆಯನ್ನು ದಾಖಲಿಸಬೇಕಾಗುತ್ತದೆ. ಆದರೆ ಕಾರ್ಯನಿರ್ವಾಹಕ ದಂಡಾಧಿಕಾರಿಗಳು ಪೋಲೀಸರಿಂದ ಮಾಹಿತಿ ಬಂದಿದ್ದಾಗ್ಯೂ, ಕೂಡಲೇ ವಿಷಯವನ್ನು ಗಂಭೀರವಾಗಿ ತೆಗೆದುಕೊಳ್ಳದೆ, ಯಾವುದಾದರೂ ಒಂದು ನೆಪ ಹೇಳಿ, ಶವ ಪಂಚನಾಮೆಯನ್ನು ನಿಗದಿತ ಸಮಯದಲ್ಲಿ ನಡೆಸದೆ, ಅಥವಾ ನಿಗದಿತ ಕ್ರಮ ಅನುಸರಿಸಿ ನಡೆಸದೇ ಇರುವ ಕೆಲವು ಪ್ರಕರಣಗಳು ಸರ್ಕಾರದ ಗಮನಕ್ಕೆ

ಬಂದಿರುತ್ತದೆ. ಇಂತಹ ಪ್ರಕರಣಗಳಲ್ಲಿ ಅಪರಾಧಿಗಳು ಕಾನೂನಿನ ಹಿಡಿತದಿಂದ ತಪ್ಪಿಸಿಕೊಳ್ಳಲು ಅವಕಾಶ ಮಾಡಿಕೊಟ್ಟಂತೆ ಆಗುತ್ತದೆ ಹಾಗೂ ಮೃತರ ಕುಟುಂಬ ವರ್ಗದವರಿಗೆ ನ್ಯಾಯ ನಿರಾಕರಣೆಯಾಗಿ ಕಾನೂನಿನ ಉದ್ದೇಶವೇ ವಿಫಲಗೊಳ್ಳುತ್ತದೆ. ಇಂತಹ ಒಂದು ಅಸಹಜ ಸಾವಿನ ಪ್ರಕರಣದಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ಸಂಬಂಧಪಟ್ಟ ಕಾರ್ಯನಿರ್ವಾಹಕ ದಂಡಾಧಿಕಾರಿ ತೋರಿರುವ ನಿರ್ಲಕ್ಷತನದ ಬಗ್ಗೆ ಬಹಳ ತೀವ್ರವಾಗಿ ತರಾಟೆಗೆ ತೆಗೆದುಕೊಂಡು, ಇದನ್ನು ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳ ಗಮನಕ್ಕೆ ತಂದು ಇನ್ನು ಮುಂದೆ ಇಂತಹ ಲೋಪಗಳಿಗೆ ಅವಕಾಶ ನೀಡದಂತೆ ನೋಡಿಕೊಳ್ಳಲು ಸೂಚಿಸಿರುತ್ತದೆ. ಮಾನ್ಯ ಉಚ್ಚ ನ್ಯಾಯಾಲಯವು Criminal Appeal No. 1548/2002, ದಿನಾಂಕ: 4.9.2003 ರಲ್ಲಿ ಮಾಡಿರುವ ಆದೇಶದ ಉದ್ಧೃತ ಭಾಗ ಈ ಕೆಳಕಂಡಂತಿದೆ.

> 6. Before parting with the judgment, we need to observe that the entire complexion of the case would obviously have been different had the Tahsildar – PW17 responded the request from the Police that he should record the dying declaration of Shabana. We need to remind this Officer and other similarly situated Officers that the law prescribes that an independent authority other than the Police such as one of the local Govt. Officers should be asked to record the dying declaration in order to add credibility and also to ensure that this is properly done. This is a case in which PW17 admits that the request was conveyed to him and that he turned it down on the ground that he is busy with census work. This Court takes a serious view of what has happened and desires to make it very clear that the request from the police to record dying declaration is a top priority matter, that it cannot wait at all and this obligation cannot be avoided and that this Court will be required to take stringent action against the Officers who abdicate their responsibility as happened in the present case. The consequences are obvious because the trial court and the High Court were required to reject the dying declaration, which may not have otherwise happened. Since, this is not the first time where an incident of this type has taken place resulting in the case going by default, the Registrar General to forward a copy of this judgment to the Principal Secretary to the Government, who in turn shall bring it to the notice of all the Officers in the State that under no circumstances can or should they decline the request from the Police to forthwith record dying declarations.

ಮಾನ್ಯ ಉಚ್ಚ ನ್ಯಾಯಾಲಯವು, ಗಮನಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಅಸ್ವಾಭಾವಿಕ ಮರಣ ಪ್ರಕರಣಗಳಲ್ಲಿ ಅದರಲ್ಲೂ ವಿಶೇಷವಾಗಿ ವಿವಾಹವಾದ ಏಳು ವರ್ಷಗಳ ಅವಧಿಯಲ್ಲಿ ಯಾವುದೇ ಮಹಿಳೆಯು ಅಸ್ವಾಭಾವಿಕವಾಗಿ ಮರಣಹೊಂದಿರುವಂತಹ ಪ್ರಕರಣಗಳಲ್ಲಿ Cr.PC ಕಲಂ 174ರ ಅಡಿಯಲ್ಲಿ ಪೋಲೀಸರಿಂದ ಮಾಹಿತಿ ಬಂದಕೂಡಲೇ ಸಂಬಂಧಪಟ್ಟ ಕಾರ್ಯನಿರ್ವಾಹಕ ದಂಡಾಧಿಕಾರಿಗಳು ಯಾವುದೇ ವಿಳಂಬಕ್ಕೆ ಆಸ್ಪದ ನೀಡದೆ ಕ್ಷಿಪ್ರಗತಿಯಲ್ಲಿ

Cr.PC ಕಲಂ 176 ರ ಅಡಿಯಲ್ಲಿ ನಿಗದಿಪಡಿಸಿರುವ ವಿಧಿ ವಿಧಾನಗಳನ್ನು ಚಾಚೂ ತಪ್ಪದೆ ಅನುಸರಿಸಲು ಸೂಚಿಸಿದೆ. Cr.PC ಕಲಂ 174 ಹಾಗೂ 176ರ ಉದ್ಧೃತ ಭಾಗವನ್ನು ಈ ಸುತ್ತೋಲೆಗೆ ಲಗತ್ತಿಸಿದೆ. ಒಂದು ವೇಳೆ ಇಂತಹ ಪ್ರಕರಣಗಳಲ್ಲಿ ಕಾರ್ಯ ನಿರ್ವಾಹಕ ದಂಡಾಧಿಕಾರಿಯಾಗಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿಯು ನಿರ್ಲಕ್ಷ್ಯತನ ಮತ್ತು ಕರ್ತವ್ಯ ಲೋಪ ಎಸಗಿರುವುದು ಮೇಲು ನೋಟಕ್ಕೆ ಕಂಡು ಬಂದ ತಕ್ಷಣವೇ ಸದರಿ ಅಧಿಕಾರಿಯನ್ನು ನಿರ್ದಾಕ್ಷಿಣ್ಯವಾಗಿ ಸೇವೆಯಿಂದ ಅಮಾನತ್ತಿನಲ್ಲಿಟ್ಟು ಮುಂದಿನ ಕ್ರಮ ಜರುಗಿಸಲಾಗುವುದೆಂದು ಈ ಮೂಲಕ ತಿಳಿಯಪಡಿಸಿದೆ.

7.2.04.

(ವಿನಯ್ ಕುಮಾರ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಕಂದಾಯ ಇಲಾಖೆ

ಗೆ:
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು

ಪ್ರತಿ:
1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗೃಹ ಮತ್ತು ಸಾರಿಗೆ ಇಲಾಖೆ, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿ ಆ ಸು ಇಲಾಖೆ, ವಿಧಾನಸೌಧ, ಬೆಂಗಳೂರು.
3) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6) ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು.
7) ಪೋಲೀಸ್ ಆರಕ್ಷಕ ಮಹಾ ನಿರೀಕ್ಷಕರು, ನೃಪತುಂಗ ರಸ್ತೆ, ಬೆಂಗಳೂರು.
8) ಪೋಲೀಸ್ ಕಮೀಷನರ್, ಬೆಂಗಳೂರು ನಗರ, ಬೆಂಗಳೂರು.
9) ಎಲ್ಲಾ ಜಿಲ್ಲಾಧಿಕಾರಿಗಳು.
10) ಎಲ್ಲಾ, ಜಿಲ್ಲಾ ಪೋಲೀಸ್ ಸೂಪರಿಂಟೆಂಡೆಂಟ್
11) ಎಲ್ಲಾ ವಿಭಾಗೀಯ ಸಹಾಯಕ ಕಮೀಷನರುಗಳಿಗೆ
12) ಎಲ್ಲಾ ತಾಲ್ಲೂಕು ತಹಸೀಲ್ದಾರ್ ಹಾಗೂ ತಾಲ್ಲೂಕು ಕಾರ್ಯ ನಿರ್ವಾಹಕ ದಂಡಾಧಿಕಾರಿಗಳಿಗೆ
13) ಸರ್ಕಾರದ ಉಪ ಕಾರ್ಯದರ್ಶಿ, ಕಂದಾಯ ಇಲಾಖೆ (ಸಮನ್ವಯ)
14) ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿಗಳು.